3314 - ಶ್ರೀ ಪಿ. ಸಿ. ಸಿದ್ದಗೌಡ (ಕಲಘಟಗಿ): ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ಧಾರವಾಡ ನಗರದಲ್ಲಿ ಮಹಿಳಾ ಪದವಿ ಕಾಲೇಜುಗಳನ್ನು ಪ್ರಾರಂಭಿಸುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆಯೆ?

ಆ) ಹಾಗಿದ್ದಲ್ಲಿ ಯಾವಾಗ ಈ ಕಾಲೇಜುಗಳನ್ನು ಪ್ರಾರಂಭಿಸಲಾಗುವುದು?

ಇ) ಸರ್ಕಾರದ ಈ ವಿಷಯಕ್ಕೆ ಸಂಬಂಧಪಟ್ಟ ಹಾಗೆ ಯಾವುದಾದರೂ ಯೋಜನಗಳನ್ನು ರೂಪಿಸಿದೆಯೇ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು):

ಅ) ಈ ದಿಶೆಯಲ್ಲಿ ಯಾವುದೇ ಪ್ರಸ್ತಾವನೆಗಳು ಸರ್ಕಾರಕ್ಕೆ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಸಕಲೇಶಪುರ ಪ್ರಥಮ ದರ್ಜೆ ಕಾಲೇಜಿಗೆ ಕಟ್ಟಡ

3353 - ಶ್ರೀ ಬಿ. ಆರ್. ಗುರುದೇವ (ಸಕಲೇಶಪುರ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಕಲೇಶಪುರ ಪಟ್ಟಣದಲ್ಲಿ ಒಂದೇ ಕಟ್ಟಡದಲ್ಲಿ ಸರ್ಕಾರಿ ಪ್ರೌಢಶಾಲೆ, ಕಿರಿಯ ಕಾಲೇಜು ಮತ್ತು ಪ್ರಥಮ ದರ್ಜೆ ಕಾಲೇಜಿನ ತರಗತಿಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಸದರಿ ಕಟ್ಟಡವು ತುಂಬಾ ಚಿಕ್ಕದಾಗಿದ್ದು ಮತ್ತು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಪ್ರತ್ಯೇಕವಾದ ಪ್ರಥಮ ದರ್ಜೆ ಕಾಲೇಜಿನ ಕಟ್ಟಡವನ್ನು ಕಟ್ಟಿಸಲು ಸರ್ಕಾರವು ಜರೂರು ಕ್ರಮ ಕೈಗೊಳ್ಳುವುದೇ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳು ಸಚಿವರು) :

ಅ) ಬಂದಿದೆ.

ಆ)ಬಂದಿದೆ.

ಇ) 1991-92ನೇ ಸಾಲಿಗೆ ಈ ಕಾಲೇಜಿನ ಕಟ್ಟಡಕ್ಕಾಗಿ ರೂ. 6.20 ಲಕ್ಷ ಪಣ ಒದಗಿಸಲಾಗಿದೆ. ಇದಕ್ಕೆ ಸಂಬಂಧಪಟ್ಟ ಮುಂದಿನ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಆಲೂರು ಮತ್ತು ಸಕಲೇಶಪುರಕ್ಕೆ ವಿದ್ಯುತ್ ಸರಬರಾಜು ಅಡಚಣೆ.

3345 - ಶ್ರೀ ಬಿ. ಆರ್. ಗುರುದೇವ(ಸಕಲೇಶಪುರ) : ಮಾನ್ಯ ಇಂಧನ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆಲೂರು ಮತ್ತು ಸಕಲೇಶಪುರ ತಾಲ್ಲೂಕುಗಳು ಮಲೆನಾಡು ಪ್ರದೇಶಗಳಲ್ಲಿದ್ದು ಮಳೆಗಾಲದಲ್ಲಿ ವಿದ್ಯುತ್ ಕಂಬಗಳು ಹಾನಿಗೊಳಗಾಗಿ ಸುಮಾರು 3-4 ತಿಂಗಳುಗಳ ಕಾಲ ವಿದ್ಯುತ್ ಸರಬರಾಜು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?